*ಓ.ಎಸ್.ನಂ.370/2021*
**ಪಿ ಡಬ್ಲ್ಯೂ-1**

***<u>ದಿಃ 23-06-2022 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>***

***<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಸಿ ಜೆ ವಕೀಲರಿಂದ.</u>***

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನ್ನ ಸ್ವಂತ ಮಾಹಿತಿ ಮೇರೆಗೆ ಹೇಳಿ ಬರೆಸಿದ್ದು ಅವು ಸತ್ಯವಾಗಿರುತ್ತವೆ. ಪ್ರಮಾಣಪತ್ರದಲ್ಲಿನ ಸಂಗತಿಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನ್ಯಾಯಾಲಯಕ್ಕೆ ದಾವ ಆಸ್ತಿಗೆ ಸಂಬಂಧಪಟ್ಟಂತೆ ದಿನಾಂಕಃ *19-02-1982* ರ ದಾಖಲಾತಿಯನ್ನು ಹಾಜರುಪಡಿಸಿದ್ದು, ಸಾಕ್ಷಿಯು ಸದರಿ ಮೂಲ ದಾಖಲಾತಿಯನ್ನು ಬ್ಯಾಂಕಿನಲ್ಲಿ ಸಾಲ ಪಡೆಯಲು ಅಡಮಾನ ಇಟ್ಟಿರುವುದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಆದ್ದರಿಂದ ಸದರಿ ದಾಖಲೆಯನ್ನು ನಿಪಿ-*1* ಎಂದು ಗುರುತಿಸಲಾಯಿತು. ದಾ ಆಸ್ತಿಗೆ ಸಂಬಂಧಪಟ್ಟಂತೆ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*2* ಎಂದು, ಕಾರ್ಬನ್ ಕಾಫಿಯ ಕಂದಾಯ ರಸೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*3* ಎಂದು, ತರೀಕೆರೆ ಪೊಲೀಸರು ನೀಡಿರುವ ಎರಡು ಹಿಂಬರಹಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-*4* ಮತ್ತು ನಿಪಿ-*5* ಎಂದು, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*6* ಎಂದು, ಲಿಖಿತ ದೂರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-*7* ಎಂದು, ತರೀಕೆರೆ ಪೊಲೀಸರು ನೀಡಿರುವ ಮೂರು ಸ್ವೀಕೃತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-*8* ರಿಂದ ನಿಪಿ-*10* ಎಂದು ಗುರುತಿಸಲಾಯಿತು.

***<u>ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲ</u>***<u>ರಿಂದಃ</u>

ಪ್ರತಿವಾದಿಗಳ ಪರ ವಕೀಲರು ಹಾಜರಿದ್ದು, ಪಾಟೀ ಸವಾಲಿಗೆ ಸಮಾಯವಕಾಶ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**